ವಿಭಾಗ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE:

## ಕಡೇ ದಿನ ಎಲ್ಲರಿಂದ ನಾಮಪತ್ರ | ಜೆಡಿಎಸ್‌ನಿಂದ ಇಂಚರ ಗೋವಿಂದರಾಜುಗೆ ಟಿಕೆಟ್

# ಏಳಕ್ಕೆ ಏಳೂ ಮಂದಿ ಅವಿರೋಧ ಆಯ್ಕೆ ಖಚಿತ

■ **ವಿಕ ಸುದ್ದಿಲೋಕ** ಬೆಂಗಳೂರು

ವಿಧಾನಸಭೆಯಿಂದ ವಿಧಾನ ಪರಿಷತ್‌ನ 7 ಸ್ಥಾನಗಳಿಗೆ ನಡೆಯುವ ಚುನಾವಣೆಗೆ ಬಿಜೆಪಿಯ ಸುನೀಲ್ ವಲ್ಯಾಪುರೆ, ಪ್ರತಾಪ್ ಸಿಂಹ ನಾಯಕ್, ಎಂ.ಟಿ.ಬಿ.ನಾಗರಾಜ್, ಆರ್. ಶಂಕರ್, ಕಾಂಗ್ರೆಸ್‌ನ ಬಿ.ಕೆ.ಹರಿಪ್ರಸಾದ್, ನಜೀರ್ ಅಹ್ಮದ್ ಹಾಗೂ ಜೆಡಿಎಸ್‌ನಿಂದ ಇಂಚರ ಗೋವಿಂದರಾಜು ಅಭ್ಯರ್ಥಿಗಳಾಗಿ ನಾಮಪತ್ರ ಸಲ್ಲಿಸಿದ್ದಾರೆ.

ಬಿಜೆಪಿಯ ಅಭ್ಯರ್ಥಿಗಳು ಡಿಸಿಎಂ ಗೋವಿಂದ ಕಾರಜೋಳ, ರಾಜ್ಯ ಬಿಜೆಪಿ ಅಧ್ಯಕ್ಷ ನಳಿನ್ ಕುಮಾರ್ ಕಟೀಲ್, ಪಕ್ಷದ ಪ್ರಧಾನ ಕಾರ್ಯದರ್ಶಿ ಅರವಿಂದ ಲಿಂಬಾವಳಿ ಹಾಗೂ ಸಚಿವರಾದ ಎಸ್.ಟಿ.ಸೋಮಶೇಖರ್, ಬೈರತಿ ಬಸವರಾಜು ಅವರೊಂದಿಗೆ ವಿಧಾನಸಭೆ ಕಾರ್ಯದರ್ಶಿ ಅವರಿಗೆ ನಾಮಪತ್ರ ಸಲ್ಲಿಸಿದರು.

ಕಾಂಗ್ರೆಸ್ ಅಭ್ಯರ್ಥಿಗಳೊಂದಿಗೆ ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಪಕ್ಷದ ಮುಖಂಡರಾದ ದಿನೇಶ್ ಗುಂಡೂರಾವ್, ರಾಮಲಿಂಗಾರೆಡ್ಡಿ ಇದ್ದರು. ಜೆಡಿಎಸ್ ಅಭ್ಯರ್ಥಿಯೊಂದಿಗೆ ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ, ಮಾಜಿ ಸಚಿವ ಬಸವರಾಜ ಹೊರಟ್ಟಿ ಇದ್ದರು.

ಇದಕ್ಕೂ ಮೊದಲು ಬಿಜೆಪಿ ಅಭ್ಯರ್ಥಿಗಳು ಪಕ್ಷದ ಕಚೇರಿ ಜಗನ್ನಾಥ ಭವನಕ್ಕೆ ತೆರಳಿ ಪಕ್ಷದ ಅಧ್ಯಕ್ಷರಿಂದ ಬಿ-ಫಾರಂ ಸ್ವೀಕರಿಸಿದರು. ಕಾಂಗ್ರೆಸ್ ಕಚೇರಿಯಲ್ಲಿ ಪ್ರಮುಖರ ಸಭೆ ನಡೆಸಿ ಅಭ್ಯರ್ಥಿಗಳಿಗೆ ಬಿ-ಫಾರಂ ನೀಡಲಾಯಿತು.

**ಅವಿರೋಧ ಆಯ್ಕೆ ಖಚಿತ:** ಪರಿಷತ್‌ನ 7 ಸ್ಥಾನಗಳಿಗೆ 7 ಅಭ್ಯರ್ಥಿಗಳು ಮಾತ್ರ ನಾಮಪತ್ರ ಸಲ್ಲಿಸಿರುವುದರಿಂದ ಅವಿರೋಧ ಆಯ್ಕೆ ಖಚಿತ. ನಾಮಪತ್ರ ಪರಿಶೀಲನೆ ಕಾರ್ಯ ಶುಕ್ರವಾರ ನಡೆಯಲಿದೆ. ನಾಮಪತ್ರ ಹಿಂಪಡೆಯಲು ಜೂನ್ 22 ಕಡೆಯ ದಿನವಾಗಿದೆ. ಈ ಪ್ರಕ್ರಿಯೆ ಬಳಿಕ ಅವಿರೋಧ ಆಯ್ಕೆ ಬಗ್ಗೆ ಪ್ರಕಟಣೆ ಹೊರಬೀಳಲಿದೆ.





ಬಿಜೆಪಿ ಅಭ್ಯರ್ಥಿಗಳಾದ ಸುನೀಲ್ ವಲ್ಯಾಪುರೆ, ಪ್ರತಾಪ್ ಸಿಂಹ ನಾಯಕ್, ಎಂ.ಟಿ.ಬಿ.ನಾಗರಾಜ್, ಆರ್.ಶಂಕರ್ ಗುರುವಾರ ನಾಮಪತ್ರ ಸಲ್ಲಿಸಿದ ಬಳಿಕ ವಿಜಯದ ಸಂಕೇತ ತೋರಿಸಿದರು. (2ನೇ ಚಿತ್ರ) ಜೆಡಿಎಸ್ ಅಭ್ಯರ್ಥಿ ಇಂಚರ ಗೋವಿಂದರಾಜು ಉಮೇದುವಾರಿಕೆಗೆ ಎಚ್‌ಡಿಕೆ ಸಾಥ್ ನೀಡಿದರು.

## ಕಾಂಗ್ರೆಸ್‌ಗೆ ಶಕ್ತಿ ತುಂಬಲು ಹಿರಿಯರಿಗೆ ಅವಕಾಶ: ಡಿಕೆಶಿ

**ಬೆಂಗಳೂರು:** ಪಕ್ಷಕ್ಕೆ ಶಕ್ತಿ ತುಂಬುವ ಉದ್ದೇಶದಿಂದ ಬಿ.ಕೆ.ಹರಿಪ್ರಸಾದ್ ಹಾಗೂ ನಜೀರ್ ಅಹ್ಮದ್ ಅವರ ಹಿರಿತನವನ್ನು ಪರಿಗಣಿಸಿ ವಿಧಾನ ಪರಿಷತ್‌ಗೆ ಆಯ್ಕೆ ಮಾಡುವ ತೀರ್ಮಾನಕ್ಕೆ ಬರಲಾಯಿತು ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

ಕೆಪಿಸಿಸಿ ಕಚೇರಿಯಲ್ಲಿ ಗುರುವಾರ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯಲ್ಲಿ ಈ ಇಬ್ಬರು ಅಭ್ಯರ್ಥಿಗಳಿಗೆ ಪಕ್ಷದ 'ಬಿ' ಫಾರಂ ವಿತರಿಸಿ ಮಾತನಾಡಿದ ಅವರು, ''ಹರಿಪ್ರಸಾದ್ ಮತ್ತು ನಜೀರ್ ಅಹ್ಮದ್ ವಿದ್ಯಾರ್ಥಿ ಮುಖಂಡರಾಗಿ ತಳಮಟ್ಟದಿಂದ ರಾಷ್ಟ್ರಮಟ್ಟದವರೆಗೆ ಬೆಳೆದಿದ್ದಾರೆ. ಈ ನಾಯಕರ ಹಿರಿತನ ಪರಿಗಣಿಸಿ, ಪಕ್ಷಕ್ಕೆ ಶಕ್ತಿ ತುಂಬುವ ಉದ್ದೇಶದಿಂದ ವಿಧಾನ ಪರಿಷತ್‌ಗೆ ಆಯ್ಕೆ ಮಾಡುವ ಒಮ್ಮತದ ತೀರ್ಮಾನವನ್ನು ಪಕ್ಷ ಕೈಗೊಂಡಿದೆ,'' ಎಂದು ತಿಳಿಸಿದರು.

''ವಿಧಾನ ಪರಿಷತ್ ಚುನಾವಣೆಗೆ ಪಕ್ಷದಲ್ಲಿ ಸಾಕಷ್ಟು ಆಕಾಂಕ್ಷಿಗಳಿದ್ದರು. ಆದರೆ, ವಿಧಾನ ಪರಿಷತ್ ಹಿರಿಯರ ಸದನವಾಗಿದ್ದು, ಪಕ್ಷ ಸಂಘಟನೆ ಜತೆಗೆ, ರಾಜ್ಯದ ಹಿತಾಸಕ್ತಿಗೆ ಸಂಬಂಧಿಸಿದ ವಿಚಾರಗಳಿಗೆ ಧ್ವನಿಯಾಗುತ್ತಾರೆ ಎಂಬ ಕಾರಣಕ್ಕೆ ಅನುಭವಿ ಹಾಗೂ ಹಿರಿಯರಾದ ಹರಿಪ್ರಸಾದ್ ಮತ್ತು ನಜೀರ್ ಅಹ್ಮದ್‌ಗೆ ಪಕ್ಷ ಅವಕಾಶ ಕಲ್ಪಿಸಿದೆ. ಇದೇ ಕಾರಣಕ್ಕೆ ರಾಜ್ಯಸಭೆಗೆ ಮಲ್ಲಿಕಾರ್ಜುನ ಖರ್ಗೆ ಹಾಗೂ ಎಚ್.ಡಿ.ದೇವೇಗೌಡರ ಆಯ್ಕೆಗೆ ಕಾಂಗ್ರೆಸ್ ಅವಕಾಶ ಕಲ್ಪಿಸಿತ್ತು,'' ಎಂದು ಹೇಳಿದರು.



ಪಕ್ಷದ ಮುಖಂಡರ ಸಮ್ಮುಖದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಬಿ.ಕೆ. ಹರಿಪ್ರಸಾದ್ ಗುರುವಾರ ನಾಮಪತ್ರ ಸಲ್ಲಿಸಿದರು.

ಸಾಮಾನ್ಯ ಕಾರ್ಯಕರ್ತರನ್ನು ಗುರುತಿಸಿದ್ದಕ್ಕೆ ಖುಷಿಯಾಗಿದೆ. ನಾನು ಅಭ್ಯರ್ಥಿಯಾಗುವೆ ಎಂದುಕೊಂಡಿರಲಿಲ್ಲ.
**-ಪ್ರತಾಪ್ ಸಿಂಹ ನಾಯಕ್** ಬಿಜೆಪಿ ಅಭ್ಯರ್ಥಿ

ಕಲ್ಯಾಣ ಕರ್ನಾಟಕಕ್ಕೆ ಪ್ರಾತಿನಿಧ್ಯ ನೀಡಿದ್ದರಿಂದ ಸಂತೋಷವಾಗಿದೆ.
**-ಸುನೀಲ್ ವಲ್ಯಾಪುರೆ** ಬಿಜೆಪಿ ಅಭ್ಯರ್ಥಿ

40 ವರ್ಷಕ್ಕೂ ಹೆಚ್ಚು ಕಾಲ ಕಾರ್ಯಕರ್ತನಾಗಿ ದುಡಿದಿದ್ದಕ್ಕೆ ಹೈಕಮಾಂಡ್ ಈ ಅವಕಾಶ ನೀಡಿದೆ. ನಾನು ಅರ್ಜಿ ಹಾಕಿರಲಿಲ್ಲ, ಸಿದ್ದರಾಮಯ್ಯ, ಡಿಕೆಶಿ ಕಳುಹಿಸಿದ್ದ ಪಟ್ಟಿಯಲ್ಲೂ ನನ್ನ ಹೆಸರಿತ್ತು.
**-ಬಿ.ಕೆ.ಹರಿಪ್ರಸಾದ್** ಕಾಂಗ್ರೆಸ್ ಅಭ್ಯರ್ಥಿ

ವಿಧಾನ ಪರಿಷತ್ ಚುನಾವಣೆಗೆ ನಮ್ಮ ಪಕ್ಷದಿಂದ ಸ್ಪರ್ಧಿಸುತ್ತಿರುವ ಪ್ರತಾಪ್ ಸಿಂಹ ನಾಯಕ್, ಎಂ.ಟಿ.ಬಿ.ನಾಗರಾಜ್, ಆರ್.ಶಂಕರ್, ಸುನೀಲ್ ವಲ್ಯಾಪುರೆ ಅವರಿಗೆ ಅಭಿನಂದನೆಗಳು.
**-ಬಿ.ಎಸ್.ಯಡಿಯೂರಪ್ಪ** ಸಿಎಂ

ಸಿದ್ಧಾಂತದ ಮೂಲಕ ಹಲವಾರು ಕಾರ್ಯಕರ್ತರನ್ನು ಬೆಳೆಸಿದ ಪಕ್ಷ ಬಿಜೆಪಿ. ಇದರ ಆಧಾರದಲ್ಲಿ ಸೂಕ್ತ ಆಯ್ಕೆ ಮಾಡಲಾಗಿದೆ. ಸರಕಾರ ಬರಲು ಕಾರಣರಾದವರಿಗೂ ಸ್ಥಾನ ನೀಡಲಾಗಿದೆ.
**-ನಳಿನ್ ಕುಮಾರ್ ಕಟೀಲ್** ಬಿಜೆಪಿ ಅಧ್ಯಕ್ಷ

ಕೋಲಾರ ಮೂಲದ ಸಾಮಾನ್ಯ ಕಾರ್ಯಕರ್ತ ಗೋವಿಂದರಾಜು ಅವರಿಗೆ ನಮ್ಮ ಪಕ್ಷದಿಂದ ಪರಿಷತ್ ಟಿಕೆಟ್ ನೀಡಲಾಗಿದೆ. ಕೋಲಾರ-ಚಿಕ್ಕಬಳ್ಳಾಪುರ ಭಾಗದಲ್ಲಿ ಪಕ್ಷ ಸಂಘಟನೆಗೆ ಇದರಿಂದ ಮತ್ತಷ್ಟು ಶಕ್ತಿ ಸಿಗಲಿದೆ.
**-ಎಚ್.ಡಿ.ಕುಮಾರಸ್ವಾಮಿ** ಮಾಜಿ ಸಿಎಂ

ಸಿಎಂ ಅವರು ನನಗೆ ಮಾತು ಕೊಟ್ಟಂತೆಯೇ ನಡೆದುಕೊಂಡಿದ್ದಾರೆ. ಪಕ್ಷದ ವರಿಷ್ಠರು ಹಾಗೂ ಸಿಎಂಗೆ ಧನ್ಯವಾದಗಳು.
**-ಆರ್.ಶಂಕರ್** ಬಿಜೆಪಿ ಅಭ್ಯರ್ಥಿ

ವಿಧಾನ ಪರಿಷತ್ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದೇನೆ. ಉಪ ಚುನಾವಣೆಯಲ್ಲಿ ನನ್ನ ಸೋಲಿಗೆ ತ್ರಿಮೂರ್ತಿಗಳು ಕಾರಣರಾಗಿದ್ದರು. ಸಿದ್ದರಾಮಯ್ಯ, ಕುಮಾರಸ್ವಾಮಿ, ಡಿ.ಕೆ.ಶಿವಕುಮಾರ್ ಸೇರಿ ನನ್ನನ್ನು ಸೋಲಿಸಿದ್ದರು. ಎಚ್.ವಿಶ್ವನಾಥ್ ಸೋಲಿಗೂ ಇವರೇ ಕಾರಣ.
**-ಎಂ.ಟಿ.ಬಿ.ನಾಗರಾಜ್** ಬಿಜೆಪಿ ಅಭ್ಯರ್ಥಿ